ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಜ್ಞಾನ ಸಾಗರ ಆವರಣ, ವಿನಾಯಕನಗರ, ಕಂಟೋನ್ಮೆಂಟ್, ಬಳ್ಳಾರಿ - 583104

ಕುಲಸಚಿವರು(ಮೌಲ್ಯಮಾಪನ) ದೂರವಾಣಿ: 08392-241011

ಸಂಖ್ಯೆ:ವಿಶ್ರೀಕೃವಿಬ/ಪರೀಕ್ಷಾ ವಿಭಾಗ/ಸು.ಅ/2021-22/ 578 ದಿನಾಂಕ: 01.09.2021

# ಸುತ್ತೋಲೆ

**ವಿಷಯ:** ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪದವಿ ಪೂರ್ಣಗೊಳಿಸಲು ಸುವರ್ಣಾವಕಾಶ (Golden Chance) ಪರೀಕ್ಷೆ ಕುರಿತು.

**ಉಲ್ಲೇಖ**
1. ಸಾಮಾನ್ಯ ವಿದ್ಯಾವಿಷಯಕ ಪರಿಷತ್ ಸಭೆಯ ಅನುಮೋದನೆ ದಿನಾಂಕ:29.03.2021
2. ಸಾಮಾನ್ಯ ಸಿಂಡಿಕೇಟ್ ಸಭೆಯ ಅನುಮೋದನೆ ದಿನಾಂಕ: 30.03.2021
3. ಸಾಮಾನ್ಯ ಸಿಂಡಿಕೇಟ್ ಸಭೆಯ ಅನುಮೋದನೆ ದಿನಾಂಕ: 12.08.2021
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 28.08.2021

*****

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲಾ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ಹಾಗೂ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ಮುಖ್ಯಸ್ಥರು/ಸಂಯೋಜಕರುಗಳಿಗೆ ಗಮನಕ್ಕೆ ತರಬಯಸುವುದೇನೆಂದರೆ, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ವಿವಿಧ ಸ್ನಾತಕ, ಸ್ನಾತಕೋತ್ತರ ಹಾಗೂ ಶಿಕ್ಷಣ ಪದವಿಗಳನ್ನು ಮತ್ತು ಡಿಪ್ಲೋಮಾಗಳನ್ನು ಪಡೆಯಲು ಪ್ರವೇಶ ಪಡೆದು ಪ್ರಶಿಕ್ಷಣದ ಅವಧಿ ಮುಗಿದ ನಂತರವೂ ಕಾರಣಾಂತರಗಳಿಂದ ಪರೀಕ್ಷೆಗಳಿಗೆ ನಿಗದಿತ ಅವಧಿಯೊಳಗೆ ಹಾಜರಾಗದೆ ಪದವಿಯನ್ನು ಪೂರ್ಣಗೊಳಿಸದೇ ಇರುವಂತಹ ಅಭ್ಯರ್ಥಿಗಳಿಗಾಗಿ ವಿಶ್ವವಿದ್ಯಾಲಯವು ಒಂದು ಉತ್ತಮ ಅವಕಾಶವನ್ನು ಕಲ್ಪಿಸಿರುತ್ತದೆ. ಕಲ್ಯಾಣ ಕರ್ನಾಟಕದ ವಿದ್ಯಾರ್ಥಿಗಳ ಆಶೋತ್ತರಗಳನ್ನು ಗೌರವಿಸಿ ಅವರನ್ನು ಪದವೀಧರರನ್ನಾಗಿ ಸಮಾಜಕ್ಕೆ ಪರಿಚಯಿಸುವ ಉದಾತ್ತ ನಿಲುವಿನಿಂದ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯವು ತನ್ನ ದಶಮಾನೋತ್ಸವ ಸಂಭ್ರಮದಲ್ಲಿ ಈ ಸುವರ್ಣಾವಕಾಶ (Golden Chance) ದ ಪರೀಕ್ಷೆಯನ್ನು ಆಯೋಜಿಸಿರುತ್ತದೆ. ಪ್ರಸ್ತುತ ಪರೀಕ್ಷೆಯು ನವೆಂಬರ್/ಡಿಸೆಂಬರ್-2021ರಲ್ಲಿ ನಡೆಯಲಿದ್ದು, ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಪಡೆದು 2020-21ನೇ ಸಾಲಿಗೆ ಆರು ವರ್ಷಗಳನ್ನು ಪೂರೈಸಿದ ಸ್ನಾತಕ ಹಾಗೂ ನಾಲ್ಕು ವರ್ಷಗಳನ್ನು ಪೂರೈಸಿದ ಸ್ನಾತಕೋತ್ತರ ವಿದ್ಯಾರ್ಥಿಗಳು ಈ ಪರೀಕ್ಷೆಗೆ ಅರ್ಹರಾಗಿರುತ್ತಾರೆ. ಸುವರ್ಣಾವಕಾಶ ಪರೀಕ್ಷೆಯ ಅಧಿಸೂಚನೆಯನ್ನು ಈಗಾಗಲೇ ಹೊರಡಿಸಲಾಗಿದ್ದು, ಸದರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಅರ್ಜಿಗಳನ್ನು ನಿಗದಿತ ಸಮಯದಲ್ಲಿ ವಿಶ್ವವಿದ್ಯಾಲಯದ ಜಾಲತಾಣದ ಮೂಲಕ ಆನ್‌ಲೈನ್‌ನಲ್ಲಿ ಮಾತ್ರ ಸಲ್ಲಿಸಲು ಅರ್ಹ ಅಭ್ಯರ್ಥಿಗಗಳ ಗಮನಕ್ಕೆ ತರಲು ಸೂಚಿಸಲಾಗಿದೆ.

ಕುಲಸಚಿವರು (ಮೌಲ್ಯಮಾಪನ)
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ,
ಬಳ್ಳಾರಿ

**ಪ್ರತಿಗಳು:**
1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
2. ಕುಲಸಚಿವರು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
3. ಹಣಕಾಸು ಅಧಿಕಾರಿಗಳು ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
4. ಮೆ// ಲಾಜಿಸಿಸ್, ಬೆಂಗಳೂರು, ಶಾಖೆ ವಿಶ್ರೀಕೃ ವಿಶ್ವವಿದ್ಯಾಲಯ ಆವರಣ, ಬಳ್ಳಾರಿ.
5. ಎಲ್ಲಾ ಸ್ನಾತಕ ಮತ್ತು ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು/ಸಂಯೋಜಕರು, ವಿ.ಶ್ರೀ.ಕೃ. ವಿಶ್ವವಿದ್ಯಾಲಯ, ಬಳ್ಳಾರಿ ರವರ ಮಾಹಿತಿಗಾಗಿ.